# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1905(2260)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ರಾಜ್ಯ ಹಣಕಾಸು ಆಯೋಗವು RDPR ಇಲಾಖೆಗೆ ಬಿಡುಗಡೆ ಮಾಡುವ ಅನುದಾನ ಕುರಿತು

(ಅ) ಕಳೆದ 3 ವರ್ಷಗಳಲ್ಲಿ ರಾಜ್ಯ ಹಣಕಾಸು ಆಯೋಗವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲು ಶಿಫಾರಸ್ಸು ಮಾಡಿದೆ; ಈ ಶಿಫಾರಸ್ಸುಗಳ ಅನ್ವಯ ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಹಾಸನ ಜಿಲ್ಲಾ ಪಂಚಾಯಿತಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಇದರಲ್ಲಿ ಪ್ರತಿ ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳು ಯಾವ ಹಂತದಲ್ಲಿದೆ; ಈ ಕಾಮಗಾರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಈ) ಹಾಸನ ಜಿಲ್ಲಾ ಪಂಚಾಯತ್ ವತಿಯಿಂದ ಕೈಗೊಂಡಿರುವ ಹಲವಾರು ಕಾಮಗಾರಿಗಳನ್ನು ಪೂರ್ಣಗೊಳಿಸದೇ ಇದ್ದರೂ ಕೂಡ ಕಾಮಗಾರಿಗಳನ್ನು ಮಾಡಲಾಗಿದೆ ಎಂದು ದಾಖಲೆಗಳನ್ನು ಸೃಷ್ಟಿಸಿ ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು? (ಪ್ರಕರಣವಾರು ವಿವರ ನೀಡುವುದು)